# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು ) |
| ಚುಕ್ಕೆ ಗುರುತು ರಹಿತ ಪ್ರಶ್ನೆ ಸಂಖ್ಯೆ | : | LCQ 2086 ( 2334 ) |
| ವಿಷಯ | : | ಜಲಜೀವನ್ ಮಿಷನ್ ಕಾಮಗಾರಿಯ ಬಗ್ಗೆ. |
| ಉತ್ತರಿಸಬೇಕಾದ ದಿನಾಂಕ | : | 27.03.2026 |

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಎಷ್ಟು ಗ್ರಾಮಗಳಲ್ಲಿ ಜಲಜೀವನ್ ಮಿಷನ್ ಕಾಮಗಾರಿಗಳು ನಡೆಯುತ್ತಿವೆ; ಎಷ್ಟು ಪೂರ್ಣಗೊಂಡಿದೆ: ಎಷ್ಟು ಗ್ರಾಮಪಂಚಾಯತಿಗೆ ಹಸ್ತಾಂತರಿಸಲಾಗಿದೆ; (ಗ್ರಾಮವಾರು ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ 354 ಗ್ರಾಮಗಳಲ್ಲಿ ಒಟ್ಟಾರೆಯಾಗಿ 700 ಸಂಖ್ಯೆಯಷ್ಟು ಏಕ ಗ್ರಾಮ ಕುಡಿಯುವ ನೀರು ಕಾಮಗಾರಿಗಳನ್ನು, ಕೈಗೆತ್ತಿಕೊಳ್ಳಲಾಗಿರುತ್ತದೆ , ಈ ಪೈಕಿ 310 ಗ್ರಾಮಗಳಲ್ಲಿ 656 ಕಾಮಗಾರಿಗಳು ಪೂರ್ಣಗೊಂಡಿದ್ದು, ಅವುಗಳಲ್ಲಿ 277 ಗ್ರಾಮಗಳಲ್ಲಿನ 616 ಕಾಮಗಾರಿಗಳನ್ನು ಆಯಾ ಗ್ರಾಮ ಪಂಚಾಯತ್ ಗಳಿಗೆ ಹಸ್ತಾಂತರಿಸಲಾಗಿದ್ದು, ಬಾಕಿ 40 ಕಾಮಗಾರಿಗಳನ್ನು ಹಸ್ತಾಂತರಿಸಬೇಕಾಗಿರುತ್ತದೆ. ಉಳಿದಂತೆ 44 ಗ್ರಾಮಗಳಲ್ಲಿ 44 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಗ್ರಾಮವಾರು ವಿವರಗಳನ್ನು "ಅನುಬಂಧ-1 ರಲ್ಲಿ ಒದಗಿಸಿದೆ.<br><br>ಅಲ್ಲದೇ ಜಿಲ್ಲೆಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ 7 ಬಹುಗ್ರಾಮ ಕುಡಿಯುವ ನೀರು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಅವುಗಳ ಪೈಕಿ 2 ಯೋಜನೆಗಳು ಪೂರ್ಣಗೊಂಡಿದ್ದು , ಬಾಕಿ 5 ಯೋಜನೆಗಳು ಪ್ರಗತಿಯಲ್ಲಿರುತ್ತವೆ. |
| ಆ) | ಸದರಿ ಜಲಜೀವನ್ ಮಿಷನ್ ಕಾಮಗಾರಿಯೂ ಅತ್ಯಂತ ಕಳಪೆ ಗುಣಮಟ್ಟದ್ದಾಗಿದೆ ಎಂಬ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು; | ಜಲಜೀವನ್ ಮಿಷನ್ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳು ಅತ್ಯಂತ ಕಳಪೆ ಗುಣಮಟ್ಟದ್ದಾಗಿರುವ ಕುರಿತು ಯವುದೇ ದೂರುಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಇ) | ಇಂತಹ ಜನಪರ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಗುತ್ತಿಗೆದಾರರು ಮತ್ತು ಅಧಿಕಾರಿಗಳು ಸರಿಯಾಗಿ ಸಿದ್ಧತೆ ಮಾಡಿಕೊಳ್ಳದೇ ಕಾಮಗಾರಿಯನ್ನು ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು? | ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಗುತ್ತಿಗೆದಾರರು ಮತ್ತು ಅಧಿಕಾರಿಗಳು ಸರಿಯಾಗಿ ಸಿದ್ಧತೆ ಮಾಡಿಕೊಳ್ಳದೇ ಕಾಮಗಾರಿಯನ್ನು ಪ್ರಾರಂಭಿಸಿರುವಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ಒಟ್ಟಾರೆಯಾಗಿ 700 ಸಂಖ್ಯೆಯಷ್ಟು ಕಾರ್ಯಾತ್ಮಕ ನಳ ಸಂಪರ್ಕ(FHTC) ಒದಗಿಸುವ ಕಾಮಗಾರಿಗಳನ್ನು ಪರಿಪೂರ್ಣ ಸಿದ್ಧತೆಯೊಂದಿಗೆ , ಕೈಗೆತ್ತಿಕೊಳ್ಳಲಾಗಿರುತ್ತದೆ , ಈ ಪೈಕಿ 656 ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿರುತ್ತವೆ, ಅವುಗಳಲ್ಲಿ 616 ಕಾಮಗಾರಿಗಳನ್ನು ಆಯಾ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಲಾಗಿದ್ದು, ಬಾಕಿ 40 ಕಾಮಗಾರಿಗಳನ್ನು ಹಸ್ತಾಂತರಿಸಬೇಕಾಗಿರುತ್ತದೆ. ಉಳಿದಂತೆ 44 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. |

RDWSD/CE/TECH/172/2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

"ಅನುಬಂಧ -1"

LCQ 2086 ( 2334 ) -ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು )

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿಯ ಏಕ ಗ್ರಾಮ ಕುಡಿಯುವ ನೀರು ಯೋಜನೆಗಳ ಗ್ರಾಮವಾರು ವಿವರ

| ಕ್ರ.ಸಂ | ತಾಲೂಕು | ಒಟ್ಟು ಗ್ರಾಮಗಳ ಸಂಖ್ಯೆ | ಕಾಮಗಾರಿಗಳು ಪೂರ್ಣಗೊಂಡಿರುವ ಗ್ರಾಮಗಳ ಸಂಖ್ಯೆ | ಕಾಮಗಾರಿಗಳು ಪೂರ್ಣಗೊಳ್ಳಲು ಬಾಕಿ ಇರುವ ಗ್ರಾಮಗಳ ಸಂಖ್ಯೆ | ಕಾಮಗಾರಿಗಳು ಹಸ್ತಾಂತರಗೊಂಡ ಗ್ರಾಮಗಳ ಸಂಖ್ಯೆ |
|---|---|---|---|---|---|
| 1 | ಮಂಗಳೂರು | 36 | 34 | 2 | 28 |
| 2 | ಮುಲ್ಕಿ | 20 | 15 | 5 | 15 |
| 3 | ಮೂಡಬಿದ್ರೆ | 23 | 19 | 4 | 18 |
| 4 | ಉಳ್ಳಾಲ | 19 | 18 | 1 | 16 |
| 5 | ಬಂಟ್ವಾಳ | 71 | 70 | 1 | 68 |
| 6 | ಪುತ್ತೂರು | 32 | 32 | 0 | 32 |
| 7 | ಕಡಬ | 40 | 40 | 0 | 36 |
| 8 | ಬೆಳ್ತಂಗಡಿ | 80 | 59 | 21 | 44 |
| 9 | ಸುಳ್ಯ | 33 | 23 | 10 | 20 |
| | ಒಟ್ಟು | **354** | **310** | **44** | **277** |

EIC
RDW & SD

"ಅನುಬಂಧ -2 "

## LCQ 2086 ( 2334 ) -ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು )

**ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಕೈಗೆತ್ತಿಕೊಂಡ 07 ಬಹುಗ್ರಾಮ ಕುಡಿಯುವ ನೀರು ಯೋಜನೆಗಳ ವಿವರ**

| ಕ್ರ.ಸಂ | ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಹೆಸರು | ಅಂದಾಜು ಮೊತ್ತ (ಕೋಟಿಗಳಲ್ಲಿ) | ಯೋಜನೆ ಪ್ರಸ್ತುತ ಸ್ಥಿತಿ / ಪೂರ್ಣಗೊಳ್ಳುವ ಕಾಲಮಿತಿ | ಗುತ್ತಿಗೆ ಪಡೆದ ಸಂಸ್ಥೆಗಳು |
|---|---|---|---|---|
| 1 | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ **ಇಳಂತಿಲ** ಮತ್ತು ಇತರ 209 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 176.69 | 30-04-2024 | ಮೆ|| ಮುಗ್ರೋಡಿ ಕನ್ ಸ್ಟ್ರಕ್ಷನ್ ಮಂಗಳೂರು |
| 2 | ದಕ್ಷಿಣ ಕನ್ನಡ ಜಿಲ್ಲೆಯ **ಆಲಂಕಾರು** ಮತ್ತು ಇತರ 299 ಜನವಸತಿಗಳಿಗೆ (203 ಜನವಸತಿಗಳು ಕಡಬ ತಾಲೂಕು, 53 ಜನವಸತಿಗಳು ಪುತ್ತೂರು ತಾಲೂಕು ಮತ್ತು 44 ಜನವಸತಿಗಳು ಬೆಳ್ತಂಗಡಿ ತಾಲೂಕು) DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 230 | 15-03-2025 | ಮೆ|| ಮುಗ್ರೋಡಿ ಕನ್ ಸ್ಟ್ರಕ್ಷನ್ ಮಂಗಳೂರು |
| 3 | ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲೂಕಿನ **ಕುಟ್ರುಪ್ಪಾಡಿ** ಮತ್ತು ಇತರ 131 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 102 | 14-03-2025 | ಮೆ|| ಅಮರ್ ಇನ್ಫ್ರಾಪ್ರೊಜೆಕ್ಟ್ ಮಂಗಳೂರು |
| 4 | ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕು **ಅಳಿಕೆ** ಮತ್ತು ಇತರ 123 ಜನವಸತಿಗಳಿಗೆ(ವಿಟ್ಲ ಪಟ್ಟಣ ಪಂಚಾಯತ್) ಪುತ್ತೂರು ತಾಲೂಕಿನ 319 ಜನವಸತಿಗಳಿಗೆ ಕಡಬ ತಾಲೂಕಿನ 51 ಜನವಸತಿಗಳಿಗೆ ಮತ್ತು ಸುಳ್ಯ ತಾಲೂಕಿನ 243 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 789 | 15-06-2025 | ಮೆ|| ಶಂಕರನಾರಾಯಣ ಕನ್ ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು |
| 5 | ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ಮತ್ತು **ಉಳ್ಳಾಲ** ತಾಲೂಕಿನ ಕೈರಂಗಳದಲ್ಲಿರುವ ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ನೀರಿನ ಸಂಸ್ಕರಣಾ ಘಟಕ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 139.23 | 15-06-2025 | ಶ್ರೀ ಸುಭಾ ಸೇಲ್ಸ್ ಬೆಂಗಳೂರು |
| 6 | ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ತಾಲೂಕಿನ **ಮೂಡಬಿದ್ರೆ** ಮತ್ತು ಇತರ 583 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 145.48 | 26-01-2025 ರಂದು ಭೌತಿಕವಾಗಿ ಪೂರ್ಣಗೊಂಡಿದೆ | ಮೆ|| ಮುಗ್ರೋಡಿ ಕನ್ ಸ್ಟ್ರಕ್ಷನ್ ಮಂಗಳೂರು |
| 7 | ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ಮತ್ತು ಮಂಗಳೂರು ತಾಲೂಕಿನ **ಉಳಾಯಿಬೆಟ್ಟು** ಮತ್ತು ಇತರ 132 ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | 73.1 | 26-01-2025 ರಂದು ಭೌತಿಕವಾಗಿ ಪೂರ್ಣಗೊಂಡಿದೆ | ಮೆ|| ಮುಗ್ರೋಡಿ ಕನ್ ಸ್ಟ್ರಕ್ಷನ್ ಮಂಗಳೂರು |